## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1 | ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ | 430 |
| 2 | ಸದಸ್ಯರ ಹೆಸರು | ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| 3 | ಉತ್ತರಿಸಬೇಕಾದ ದಿನಾಂಕ | 07.12.2023 |
| 4 | ಉತ್ತರಿಸುವ ಸಚಿವರು | ಮುಖ್ಯಮಂತ್ರಿ |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿರುವ ವಿವಿಧ ಇಲಾಖೆ ಹಾಗೂ ಆಯಾಯ ಇಲಾಖೆ ವ್ಯಾಪ್ತಿಯಲ್ಲಿ ಸ್ವತಂತ್ರವಾಗಿ ಕಾರ್ಯನಿರ್ವಹಿಸುತ್ತಿರುವ (ಅಟೋನೊಮಸ್) ಸಂಸ್ಥೆಗಳೂ ಸೇರಿದಂತೆ ಎಲ್ಲಾ ಸಂಸ್ಥೆ ಹಾಗೂ ನಿಕಾಯಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿ/ ಸಿಬ್ಬಂದಿಗಳ ನೇಮಕಾತಿ ಕುರಿತಂತೆ ವೃಂದ ಮತ್ತು ನೇಮಕಾತಿ ನಿಯಮಗಳನ್ನು (ಸಿಅಂಡ್ಆರ್ ನಿಯಮಗಳು) ರಚಿಸಲಾಗಿದೆಯೇ; ಕೆಲವು ಇಲಾಖೆಗಳ ಅಧೀನ ಸಂಸ್ಥೆಗಳಲ್ಲಿ ಇದುವರೆಗೂ ವೃಂದ ಮತ್ತು ನೇಮಕಾತಿ ನಿಯಮಗಳನ್ನು ರಚಿಸದಿರಲು ಕಾರಣವೇನು; ಈ ಸಂಸ್ಥೆಗಳಿಗೆ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಯಾವಾಗ ರಚಿಸಲಾಗುವುದು; (ವಿವರ ನೀಡುವುದು) | ರಾಜ್ಯ ಸರ್ಕಾರದ ಎಲ್ಲಾ ಇಲಾಖೆಗಳು ಮತ್ತು ಅವುಗಳ ಅಧೀನದಲ್ಲಿನ ಕ್ಷೇತ್ರ ಇಲಾಖೆಗಳು ವೃಂದ ಮತ್ತು ನೇಮಕಾತಿ ನಿಯಮಗಳನ್ನು ರಚಿಸಿಕೊಂಡಿರುತ್ತವೆ.<br><br>ರಾಜ್ಯದಲ್ಲಿರುವ ವಿವಿಧ ಇಲಾಖೆಗಳ ವ್ಯಾಪ್ತಿಯಲ್ಲಿ ಸ್ವತಂತ್ರವಾಗಿ ಕಾರ್ಯ ನಿರ್ವಹಿಸುತ್ತಿರುವ (ಅಟೋನೊಮಸ್) ಸಂಸ್ಥೆಗಳೂ ಸೇರಿದಂತೆ ಎಲ್ಲಾ ಸಂಸ್ಥೆ ಹಾಗೂ ನಿಕಾಯಗಳು ತಮ್ಮ ಅಧೀನದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿ/ ಸಿಬ್ಬಂದಿಗಳ ನೇಮಕಾತಿ ಕುರಿತಂತೆ ಅವುಗಳ ಸೃಜನೆಗೆ ಆಧಾರವಾಗಿರುವ ಅಧಿನಿಯಮ, ನಿಯಮ, ಸಂಸ್ಥೆಗಳ Memorandum of Association, Articles of Association, By-laws ಮತ್ತು Regulations ರಡಿಯಲ್ಲಿ ತಮ್ಮದೇ ಆದ ಸೇವಾ ನಿಯಮ/ವಿನಿಯಮನಗಳನ್ನು ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರದ ಅನುಮೋದನೆ ಪಡೆದು ರಚಿಸಿಕೊಳ್ಳುತ್ತವೆ.<br>ವೃಂದ ಮತ್ತು ನೇಮಕಾತಿ ನಿಯಮಗಳು ಅಸ್ತಿತ್ವದಲ್ಲಿಲ್ಲದ ಸ್ಥಳೀಯ ಸಂಸ್ಥೆಗಳು, ನಿಗಮ, ಮಂಡಳಿ ಮತ್ತು ಸ್ವಾಯತ್ತ ಸಂಸ್ಥೆಗಳು ಹೊಸ ವೃಂದ ಮತ್ತು ನೇಮಕಾತಿ ನಿಯಮಗಳನ್ನು ರಚಿಸುವಂತೆ ದಿನಾಂಕ: 25.09.2019ರ ಸುತ್ತೋಲೆ ಸಂಖ್ಯೆ: ಸಿಆಸುಇ 66 ಸೇನಿಡ 2019ರಲ್ಲಿ ಸೂಚನೆಗಳನ್ನು ನೀಡಲಾಗಿದೆ. (ಪ್ರತಿ ಲಗತ್ತಿಸಿದೆ.) |
| ಆ) | ರಾಜ್ಯದಲ್ಲಿ ಇರುವ ಎಲ್ಲಾ ರೀತಿಯ ಸರ್ಕಾರಿ ಸಂಸ್ಥೆಗಳ ಅಧಿಕಾರಿ/ ಸಿಬ್ಬಂದಿಗಳಿಗೆ ಎಚ್.ಆರ್.ಎಂ.ಎಸ್. ತಂತ್ರಾಂಶದ ಮೂಲಕ ವೇತನ ಹಾಗೂ ಇತರ ಭತ್ಯೆಗಳನ್ನು ಪಾವತಿಸಲಾಗುತ್ತಿದೆಯೇ; ಎಚ್ ಆರ್.ಎಂ.ಎಸ್. ತಂತ್ರಾಂಶ ರಹಿತವಾಗಿ ವೇತನ ಹಾಗೂ ಇತರ ಭತ್ಯೆಗಳನ್ನು ಪಾವತಿಸಲಾಗುತ್ತಿರುವ ಇಲಾಖೆ/ ಸಂಸ್ಥೆಗಳಾವುವು; ಇದಕ್ಕೆ ಕಾರಣವೇನು? ಈ ಇಲಾಖೆಗಳಿಗೆ ಎಚ್ ಆರ್.ಎಂ.ಎಸ್ ತಂತ್ರಾಂಶವನ್ನು ಯಾವಾಗ ಅಳವಡಿಸಲಾಗುವುದು; (ವಿವರ ನೀಡುವುದು) | ಹೆಚ್.ಆರ್.ಎಂ.ಎಸ್. ತಂತ್ರಾಂಶವನ್ನು ಉಪಯೋಗಿಸುತ್ತಿರುವ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳಲ್ಲಿ ಹೆಚ್.ಆರ್.ಎಂ.ಎಸ್. ಮೂಲಕ ವೇತನ ಪಾವತಿಯಾಗುತ್ತಿದೆ. |
| ಇ) | ವಿವಿಧ ಕಾರಣಗಳಿಗಾಗಿ ಎಚ್.ಆರ್. ಎಂ.ಎಸ್. ತಂತ್ರಾಂಶದ ಮೂಲಕ ವೇತನ ಪಾವತಿಯಾಗುವಾಗ ನಿಯಮಾನುಸಾರ ಕಡಿತ ಮಾಡುವ ಮೊತ್ತವನ್ನು ಆಯಾಯಾ ಲೆಕ್ಕ ಶೀರ್ಷಿಕೆಗಳಿಗೆ ಜಮೆಯಾಗದಿರುವುದು ಅಥವಾ ತಡವಾಗಿ ಜಮೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಸಮಸ್ಯೆಯನ್ನು ಪರಿಹರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು; (ವಿವರ ನೀಡುವುದು) | ಇಂತಹ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ. |
| ಈ) | ರಾಜ್ಯದಲ್ಲಿ ಜಾರಿಯಲ್ಲಿರುವ ವರ್ಗಾವಣೆ ಮತ್ತು ನಿಯೋಜನೆ ನಿಯಮಗಳಾವುವು; ಎಚ್. ಆರ್. ಎಂ. ಎಸ್. ತಂತ್ರಾಂಶದಲ್ಲಿ ಇವು ಪ್ರತಿಬಿಂಬಿಸುತ್ತಿದೆಯೇ; ಕಾರ್ಯಪಾಲಕ ಹುದ್ದೆಗಳಿಗೆ ಕಾರ್ಯಪಾಲಕರಲ್ಲದವರನ್ನು ನಿಯೋಜಿಸುತ್ತಿರುವುದರಿಂದ ಯೋಜನೆಗಳ ಜಾರಿಯಲ್ಲಿ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? (ವಿವರ ನೀಡುವುದು) | ರಾಜ್ಯ ಸರ್ಕಾರದ ಅಧಿಕಾರಿ /ಸಿಬ್ಬಂದಿಗಳಿಗೆ ಸಂಬಂಧಿಸಿದಂತೆ 2026-27ನೇ ಸಾಲಿನ ಸರ್ಕಾರಿ ನೌಕರರ ವರ್ಗಾವಣೆಗಳ ಬಗ್ಗೆ, ದಿನಾಂಕ: 13.04.2026ರ ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 4 ಸೇನೌವ 2026ರಲ್ಲಿ ಮಾರ್ಗಸೂಚಿಗಳನ್ನು ಹೊರಡಿಸಲಾಗಿದೆ.<br><br>ಈ ಆದೇಶದಲ್ಲಿ ನಿರ್ದಿಷ್ಟ ಪಡಿಸಿದಂತೆ ಆಯಾ ವೃಂದಗಳ ಕಾರ್ಯನಿರತ ವೃಂದ ಬಲದ ಶೇಕಡ 6ನ್ನು ಮೀರದಂತೆ ದಿನಾಂಕ: 15.04.2026 ರಿಂದ 31.05.2026ರವರೆಗೆ ಸಾರ್ವತ್ರಿಕ ವರ್ಗಾವಣೆ ಕೈಗೊಳ್ಳಲು ಸಕ್ಷಮ ಪ್ರಾಧಿಕಾರಗಳನ್ನು ಗುರುತಿಸಿ ಅಧಿಕಾರ ಪ್ರತ್ಯಾಯೋಜಿಸಲಾಗಿರುತ್ತದೆ. |

ಸರ್ಕಾರಿ ನೌಕರನು ಒಂದು ಸ್ಥಳದಲ್ಲಿರಬಹುದಾದ ಕನಿಷ್ಠ ಅವಧಿಯನ್ನು ನಿಗದಿಪಡಿಸಲಾಗಿದೆ. ಸದರಿ ಕನಿಷ್ಠ ಸೇವಾವಧಿಯನ್ನು ಈ ಕೆಳಕಂಡಂತೆ ನಿಗದಿಪಡಿಸಲಾಗಿದೆ.

| | |
|---|---|
| ಗ್ರೂಪ್ ಎ | 2 ವರ್ಷ |
| ಗ್ರೂಪ್ ಬಿ | 2 ವರ್ಷ |
| ಗ್ರೂಪ್ ಸಿ | 4 ವರ್ಷ |
| ಗ್ರೂಪ್ ಡಿ | 7 ವರ್ಷ |

ಅವಧಿ ಪೂರ್ವ ವರ್ಗಾವಣೆಗಳನ್ನು ಹಾಗೂ ಸಾಮಾನ್ಯ ವರ್ಗಾವಣಾ ಅವಧಿಯ ನಂತರದಲ್ಲಿ ಮಾಡುವ ಯಾವುದೇ ವರ್ಗಾವಣೆಗಳನ್ನು ಸರ್ಕಾರವು ನಿರ್ದಿಷ್ಟಪಡಿಸಿರುವಂತೆ ಮಾನ್ಯ ಮುಖ್ಯ ಮಂತ್ರಿಯವರ ಅನುಮೋದನ ಪಡೆದು ಕೈಗೊಳ್ಳಬೇಕಾಗುತ್ತದೆ. (ಆದೇಶದ ಪ್ರತಿ ಲಗತ್ತಿಸಿದೆ)

ಎಚ್. ಆರ್. ಎಂ. ಎಸ್. ತಂತ್ರಾಂಶದಲ್ಲಿ ಇವು ಪ್ರತಿಬಿಂಬಿಸುತ್ತವೆ.

ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಅವಕಾಶವಿದ್ದಲ್ಲಿ ಮಾತ್ರ ಆಡಳಿತಾತ್ಮಕ ಹಿತದೃಷ್ಟಿಯಿಂದ ಕೆಲವೊಂದು ಪ್ರಕರಣಗಳಲ್ಲಿ ಕಾರ್ಯಪಾಲಕ ಹುದ್ದೆಗಳಿಗೆ ಕಾರ್ಯಪಾಲಕರಲ್ಲದವರನ್ನು ನಿಯೋಜಿಸಲು ಸಕ್ಷಮ ಪ್ರಾಧಿಕಾರದ ಮಟ್ಟದಲ್ಲಿ ನಿರ್ಧಾರ ಕೈಗೊಳ್ಳಲಾಗುತ್ತಿದ

ಸಂಖ್ಯೆ: ಸಿಆಸುಇ 185 ಸೇನಿಡಿ 2024

(ಸಿದ್ದರಾಮಯ್ಯ)
ಮುಖ್ಯಮಂತ್ರಿ

**ಕರ್ನಾಟಕ ಸರ್ಕಾರ**

ಸಂಖ್ಯೆ: ಸಿಆಸುಇ 66 ಸೇನಿಡಿ 2019

ಕರ್ನಾಟಕ ಸರ್ಕಾರದ ಸಚಿವಾಲಯ
ವಿಧಾನಸೌಧ
ಬೆಂಗಳೂರು, ದಿನಾಂಕ: 25.09.2019

**ಸುತ್ತೋಲೆ**

ವಿಷಯ: ಸರ್ಕಾರದ ಎಲ್ಲಾ ಇಲಾಖೆಗಳಲ್ಲಿನ ವೃಂದ ಮತ್ತು ನೇಮಕಾತಿ ನಿಯಮಗಳ ಸಮಗ್ರ ಪರಿಷ್ಕರಣೆ ಕುರಿತು.

ಉಲ್ಲೇಖ:

1. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 97 ಸೇನಿಡಿ 2004, ದಿನಾಂಕ: 08.10.2004.
2. ಸುತ್ತೋಲೆ ಸಂಖ್ಯೆ: ಸಿಆಸುಇ 25 ಸೇನಿಡಿ 2017, ದಿನಾಂಕ: 15.12.2017 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರಿಂದ.
3. ಸುತ್ತೋಲೆ ಸಂಖ್ಯೆ: ಸಿಆಸುಇ 25 ಸೇನಿಡಿ 2017, ದಿನಾಂಕ: 09.06.2017 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರಿಂದ.
4. ಮಾನ್ಯ ಮುಖ್ಯಮಂತ್ರಿಗಳ ಟಿಪ್ಪಣಿ ಸಂಖ್ಯೆ: CM/47861/MIN(GOK)/19, ದಿನಾಂಕ: 17.09.2019.

****

1. ಮಾನ್ಯ ಮುಖ್ಯಮಂತ್ರಿಗಳು ದಿನಾಂಕ: 17.09.2019ರ ತಮ್ಮ ಟಿಪ್ಪಣಿಯಲ್ಲಿ ಪ್ರಥಮ ಆದ್ಯತೆಯ ಮೇರೆಗೆ ಸರ್ಕಾರದ ಎಲ್ಲಾ ಇಲಾಖೆಗಳ ವೃಂದ ಮತ್ತು ನೇಮಕಾತಿ ನಿಯಮಗಳ ತಿದ್ದುಪಡಿ/ಪರಿಷ್ಕರಣೆ ಮಾಡುವ ಕುರಿತು ಕೂಡಲೇ ಸಂಬಂಧಪಟ್ಟ ಅಧಿಕಾರಿಗಳಿಗೆ ನಿರ್ದೇಶನ ನೀಡಲು ಆದೇಶಿಸಿದ್ದಾರೆ.
2. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 97 ಸೇನಿಡಿ 2004, ದಿನಾಂಕ: 08.10.2004ರಲ್ಲಿ ಸರ್ಕಾರದ ವಿವಿಧ ಇಲಾಖೆಗಳು ವೃಂದ ಮತ್ತು ನೇಮಕಾತಿ ನಿಯಮಗಳನ್ನು ರಚಿಸುವ ಬಗ್ಗೆ ಕೆಲವು ಅಗತ್ಯ ಸೂಚನೆಗಳನ್ನು ನೀಡಲಾಗಿದೆ. ಅದರಂತೆ ಜಾರಿಯಲ್ಲಿರುವ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಇಲಾಖೆಯ ಅಗತ್ಯತೆಗಳಿಗೆ ತಕ್ಕಂತೆ ಕನಿಷ್ಠ 3 ವರ್ಷಗಳಿಗೊಮ್ಮೆ ಪರಿಷ್ಕರಿಸಬೇಕಾಗುತ್ತದೆ.
3. ಈ ಸಂಬಂಧ ಮೇಲೆ ಉಲ್ಲೇಖಿಸಿರುವ ದಿನಾಂಕ: 09.06.2017 ಹಾಗೂ 15.12.2017ರ ಸುತ್ತೋಲೆಗಳಲ್ಲಿ ಎಲ್ಲಾ ಇಲಾಖೆಗಳಿಗೆ ಮತ್ತೊಮ್ಮೆ ಮರುಸೂಚನೆಗಳನ್ನು ನೀಡಲಾಗಿದೆ. ಸಚಿವಾಲಯದ ವಿವಿಧ ಇಲಾಖೆಗಳು ತಮ್ಮ ವ್ಯಾಪ್ತಿಗೆ ಒಳಪಡುವ ಇಲಾಖೆಗಳು, ಸ್ಥಳೀಯ ಸಂಸ್ಥೆಗಳು, ನಿಗಮ ಮಂಡಳಿ ಮತ್ತು ಸ್ವಾಯತ್ತ ಸಂಸ್ಥೆಗಳ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಪರಿಷ್ಕರಿಸದೇ ಇರುವ ಹಿನ್ನೆಲೆಯಲ್ಲಿ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ಸರ್ಕಾರದ ವಿವಿಧ ಇಲಾಖೆಗಳೊಂದಿಗೆ ಹಲವಾರು

....2

ಪರಿಶೀಲನಾ ಸಭೆಗಳನ್ನು ಏರ್ಪಡಿಸಲಾಗಿದೆ. ಈ ಸಂದರ್ಭದಲ್ಲಿ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಸಮಗ್ರವಾಗಿ ಪರಿಷ್ಕರಿಸಿ ಪ್ರಕಟಿಸಲು ಕ್ರಮಕೈಗೊಳ್ಳುವಂತೆ ಎಲ್ಲಾ ಇಲಾಖೆಗಳಿಗೆ ಮತ್ತೊಮ್ಮೆ ಸೂಚನೆಗಳನ್ನು ನೀಡಲಾಗಿದೆ. ವೃಂದ ಮತ್ತು ನೇಮಕಾತಿ ನಿಯಮಗಳು ಅಸ್ತಿತ್ವದಲ್ಲಿಲ್ಲದ ಸ್ಥಳೀಯ ಸಂಸ್ಥೆಗಳು, ನಿಗಮ ಮಂಡಳಿ ಮತ್ತು ಸ್ವಾಯತ್ತ ಸಂಸ್ಥೆಗಳ ಹೊಸ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಕೂಡ ರಚಿಸುವಂತೆ ಸೂಚನೆಗಳನ್ನು ನೀಡಲಾಗಿರುತ್ತದೆ.

4. ಆದರೆ, ಪರಿಶೀಲಿಸಲಾಗಿ ಇದುವರೆವಿಗೆ ಸರ್ಕಾರದ ಬಹುತೇಕ ಇಲಾಖೆಗಳು ಕಳೆದ ಹಲವಾರು ವರ್ಷಗಳಿಂದ ಜಾರಿಯಲ್ಲಿರುವ ವೃಂದ ಮತ್ತು ನೇಮಕಾತಿ ನಿಯಮಗಳನ್ನೇ ಅನುಸರಿಸುತ್ತಿದ್ದು, ಈ ನಿಯಮಗಳನ್ನು ಪರಿಷ್ಕರಿಸಿ ಅಂತಿಮವಾಗಿ ಪ್ರಕಟಿಸದಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.

5. **ಈ ಹಿನ್ನೆಲೆಯಲ್ಲಿ ತಮ್ಮ ವ್ಯಾಪ್ತಿಯಲ್ಲಿರುವ ಎಲ್ಲಾ ಇಲಾಖೆಗಳ ಹಾಗೂ ಸ್ಥಳೀಯ ಸಂಸ್ಥೆಗಳ, ನಿಗಮ ಮಂಡಳಿ ಮತ್ತು ಸ್ವಾಯತ್ತ ಸಂಸ್ಥೆಗಳ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಸಮಗ್ರವಾಗಿ ಪರಿಷ್ಕರಿಸಿ 2 ತಿಂಗಳೊಳಗಾಗಿ ಅಂತಿಮಗೊಳಿಸಿ ಪ್ರಕಟಿಸುವಂತೆ ಸರ್ಕಾರದ ಎಲ್ಲಾ ಇಲಾಖೆಗಳಿಗೆ ಈ ಮೂಲಕ ಮತ್ತೊಮ್ಮೆ ಸೂಚಿಸಲಾಗಿದೆ. ಪ್ರಸ್ತುತ ಹಂತದ ಪಟ್ಟಿ ಲಗತ್ತಿಸಿದೆ.**

6. ಈ ವಿಷಯವನ್ನು ಇನ್ನು ಮುಂದೆ ಪ್ರತಿ ತಿಂಗಳು ನಡೆಯುವ ಕಾರ್ಯದರ್ಶಿಗಳ ಸಭೆಯಲ್ಲಿ ಸಮೀಕ್ಷಿಸಲಾಗುವುದೆಂದು ತಿಳಿಸಲಾಗಿದೆ.

**(ತ.ಮ. ವಿಜಯ್ ಭಾಸ್ಕರ್)**
ಸರ್ಕಾರದ ಮುಖ್ಯ ಕಾರ್ಯದರ್ಶಿ

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು.
2. ಎಲ್ಲಾ ಇಲಾಖೆಗಳ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳು.